ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 15 ನೇ ಡಿಸೆಂಬರ್, 2020

ಶ್ರೀರಾಮಪುರ-ಮೈಸೂರು ಬ್ಯಾಂಕ್ ಕಾಲೋನಿಯ ರಸ್ತೆಗಳಲ್ಲಿ ಮಳೆ ನೀರು ನುಗ್ಗಿ ತೊಂದರೆಯಾಗಿರುವ ಬಗ್ಗೆ

ಶ್ರೀ ಎಸ್. ನಾಗರಾಜ್(ಸಂದೇಶ್ ನಾಗರಾಜು)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

740 (804) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಮೈಸೂರು ನಗರದ ಶ್ರೀರಾಮಪುರದ ಎರಡನೇ ಹಂತದ ಮೈಸೂರು ಬ್ಯಾಂಕ್ ಕಾಲೋನಿ 28,29,30 ಮತ್ತು 31ನೇ ಬ್ಲಾಕ್‌ಗಳು ಕೆಳಹಂತದಲ್ಲಿದ್ದು, ಪ್ರತಿವರ್ಷ ಮಳೆಗಾಲದಲ್ಲಿ ಮಳೆ ನೀರು ಮನೆಗಳಿಗೆ ನುಗ್ಗಿ ನಿವಾಸಿಗಳಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಪ್ರದೇಶದಲ್ಲಿ ಮಳೆ ನೀರು ಸುಲಲಿತವಾಗಿ ಹರಿದು ಹೋಗಲು ದೊಡ್ಡ ಕಾಲುವೆಯನ್ನು ನಿರ್ಮಿಸುವ ಯೋಜನೆ ರೂಪಿಸಲಾಗಿದೆಯೇ; ಯಾವ ಅನುದಾನದ ಅಡಿಯಲ್ಲಿ ಈ ಯೋಜನೆಯನ್ನು ರೂಪಿಸಲಾಗಿದೆ; ಯೋಜನೆಯನ್ನು ರೂಪಿಸದಿದ್ದಲ್ಲಿ, ಈ ಬಗ್ಗೆ ಶೀಘ್ರ ಕ್ರಮ ತೆಗೆದುಕೊಂಡು ಮಳೆ ನೀರು ಸರಾಗವಾಗಿ ಹರಿದು ಹೋಗುವಂತೆ ಮಾಡುವ ಮೂಲಕ ನಿವಾಸಿಗಳಿಗೆ ಅನುಕೂಲವಾಗುವಂತೆ ಸರ್ಕಾರ ಕ್ರಮವಹಿಸುವುದೇ?